All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

28.02.2025 13.10hrs

ಮುಖ್ಯಾಂಶಗಳು:

- ಪರಂಪರೆ ಹಾಗೂ ವಿಕಾಸದ ಸಂಗಮದೊಂದಿಗೆ ನ್ಯಾಯಾಧಾರಿತ ವಿಕಸಿತ ಭಾರತ ನಿರ್ಮಾಣ - ರಾಷ್ಟ್ರಪತಿ ದ್ರೌಪದಿ ಮುರ್ಮು
- ರಾಷ್ಟ್ರೀಯ ವಿಜ್ಞಾನ ದಿನದಂದು ವಿಜ್ಞಾನ ಮತ್ತು ನಾವೀನ್ಯತೆ ಜನಪ್ರಿಯಗೊಳಿಸಲು ಪ್ರಧಾನಿ ಕರೆ
- ಎರಡನೇ ಭಾರತ-ಐರೋಪ್ಯ ಒಕ್ಕೂಟ ವ್ಯಾಪಾರ-ತಂತ್ರಜ್ಞಾನ ಮಂಡಳಿ ಸಭೆ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಭಾಗಿ
- ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆ ತರಲು ಭಾರತ ಕರೆ
- ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್; ನಿರ್ಣಾಯಕ ಪಂದ್ಯದಲ್ಲಿಂದು ಆಸ್ಟ್ರೇಲಿಯಾ - ಅಫ್ಘಾನಿಸ್ತಾನ ಮುಖಾಮುಖಿ

*****

ಪರಂಪರೆ ಮತ್ತು ವಿಕಾಸದ ಸಂಗಮದೊಂದಿಗೆ ನ್ಯಾಯದ ಮೇಲೆ ಆಧಾರಿತ ವಿಕಸಿತ ಭಾರತವನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಗುಜರಾತ್‌ನ ಗಾಂಧಿನಗರದಲ್ಲಿರುವ ರಾಷ್ಟ್ರೀಯ ವಿಧಿ-ವಿಜ್ಞಾನಗಳ ವಿಶ್ವವಿದ್ಯಾಲಯದ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿಧಿ-ವಿಜ್ಞಾನ ವಿಷಯಗಳನ್ನು ಕಡ್ಡಾಯಗೊಳಿಸಲು ಮತ್ತು ಸಾಕ್ಷ್ಯಗಳನ್ನು ಬಲಪಡಿಸಲು ಹಲವು ಬದಲಾವಣೆಗಳನ್ನು ಮಾಡಲಾಗಿದೆ. ನ್ಯಾಯಾಂಗ ಪ್ರಕ್ರಿಯೆಯಲ್ಲಿನ ಅಡೆ-ತಡೆಗಳನ್ನು ಕಡಿಮೆ ಮಾಡಿ, ವೈಜ್ಞಾನಿಕ ಮತ್ತು ನಿಖರ ಪುರಾವೆಗಳ ಆಧಾರದ ಮೇಲೆ ತ್ವರಿತ ನ್ಯಾಯ ಒದಗಿಸುವುದು ಈ ಬದಲಾವಣೆಯ ಉದ್ದೇಶವಾಗಿದೆ ಎಂದರು.

*****

ದೇಶಾದ್ಯಂತ ಇಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. ಖ್ಯಾತ ಭೌತಶಾಸ್ತ್ರಜ್ಞ ಸರ್ ಸಿ.ವಿ. ರಾಮನ್ ಅವರ 'ರಾಮನ್ ಎಫೆಕ್ಟ್'ನ ಆವಿಷ್ಕಾರದ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ ೨೮ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ಪರಿವರ್ತನಾಶೀಲ ಆವಿಷ್ಕಾರಕ್ಕಾಗಿ

ರಾಮನ್ ಅವರಿಗೆ ೧೯೩೦ ರಲ್ಲಿ ನೊಬೆಲ್ ಪ್ರಶಸ್ತಿ ನೀಡಲಾಯಿತು. ರಾಷ್ಟ್ರೀಯ ವಿಜ್ಞಾನ ದಿನದ ಹಿನ್ನೆಲೆಯಲ್ಲಿ ದೇಶಾದ್ಯಂತ ವಿವಿಧ ವಿಜ್ಞಾನವಿಷಯಾಧಾರಿತ ಚಟುವಟಿಕೆಗಳು ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಒಳಗೊಂಡಿದೆ. ದೇಶದ ಸಮಸ್ತ ಜನತೆಗೆ ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರೀಯ ವಿಜ್ಞಾನ ದಿನದ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ವಿಡಿಯೊ ಸಂದೇಶ ಹಂಚಿಕೊಂಡಿರುವ ಅವರು, ಜಿಜ್ಞಾಸೆಯೇ ವಿಜ್ಞಾನದ ತಾಯಿ. ವಿಜ್ಞಾನ ಮತ್ತು ಜ್ಞಾನ ಎಲ್ಲ ಸಮಸ್ಯೆಗಳಿಗೆ ಪರಿಹಾರದ ಬಾಗಿಲುಗಳನ್ನು ತೆರೆಯಲು ಸಹಕಾರಿ ಎಂದಿದ್ದಾರೆ. ಇದೇ ವೇಳೆ, ವಿಕಸಿತ ಭಾರತ ನಿರ್ಮಾಣಕ್ಕಾಗಿ ವಿಜ್ಞಾನದ ಬಳಕೆಯೊಂದಿಗೆ ವಿಜ್ಞಾನ ಹಾಗೂ ನಾವಿನ್ಯತೆಯನ್ನು ಮತ್ತಷ್ಟು ಜನಪ್ರಿಯಗೊಳಿಸಲು ಪ್ರಧಾನಿ ಕರೆ ನೀಡಿದ್ದಾರೆ. ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಅವರಿಂದು 'ರಾಷ್ಟ್ರೀಯ ವಿಜ್ಞಾನ ದಿನದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ರಾಷ್ಟ್ರೀಯ ವಿಜ್ಞಾನ ದಿನದ ಹಿನ್ನೆಲೆಯಲ್ಲಿ ಹೈದರಾಬಾದ್‌ನಲ್ಲಿ ಆಯೋಜಿಸಲಾಗಿರುವ ರಕ್ಷಣಾ ಮತ್ತು ವೈಮಾನಿಕ ಪ್ರದರ್ಶನ 'ವಿಜ್ಞಾನ ವೈಭವ್ ೨೦೨೫' ಅನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಉದ್ಘಾಟಿಸಲಿದ್ದಾರೆ. ಇದರ ಭಾಗವಾಗಿ ಇತ್ತೀಚೆಗೆ ಪರೀಕ್ಷಿಸಲಾದ ಹೈಪರ್‌ಸಾನಿಕ್ ಕ್ಷಿಪಣಿ, ಯುದ್ಧ ಟ್ಯಾಂಕ್-ಅರ್ಜುನ್, ಡ್ರೋನ್‌ಗಳು ಮತ್ತು ರೇಡಾರ್‌ಗಳನ್ನು ಹೈದರಾಬಾದ್‌ನ ಗಚ್ಚಿಬೌಲಿ ಕ್ರೀಡಾಂಗಣದಲ್ಲಿ ಪ್ರದರ್ಶಿಸಲಾಗುವುದು. ವಿಕಸಿತ ಭಾರತದ ಧ್ಯೇಯದೊಂದಿಗೆ ವಿಜ್ಞಾನ ಮತ್ತು ನಾವೀನ್ಯತೆಯಲ್ಲಿ ಜಾಗತಿಕ ನಾಯಕತ್ವಕ್ಕಾಗಿ ಭಾರತೀಯ ಯುವಕರ ಸಬಲೀಕರಣ ಈ ಬಾರಿಯ ರಾಷ್ಟ್ರೀಯ ವಿಜ್ಞಾನ ದಿನದ ಧ್ಯೇಯವಾಕ್ಯವಾಗಿದೆ. ವಿಜ್ಞಾನದ ಮಹತ್ವ ಮತ್ತು ಅದರ ಅನ್ವಯದ ಕುರಿತು ಜನರಲ್ಲಿ ಅರಿವು ಮೂಡಿಸುವುದು ಈ ದಿನದ ಗುರಿಯಾಗಿದೆ.

*****

ನವದೆಹಲಿಯಲ್ಲಿಂದು ನಡೆದ ಎರಡನೇ ಭಾರತ ಐರೋಪ್ಯ ಒಕ್ಕೂಟ ವ್ಯಾಪಾರ ಮತ್ತು ತಂತ್ರಜ್ಞಾನ ಮಂಡಳಿ ಸಭೆಯಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್, ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಭಾಗವಹಿಸಿದ್ದರು. ಐರೋಪ್ಯ ಆಯೋಗದ ತಂತ್ರಜ್ಞಾನ ಸಾರ್ವಭೌಮತೆ ಭದ್ರತೆಯ ಕಾರ್ಯನಿರ್ವಾಹಕ ಉಪಾಧ್ಯಕ್ಷೆ ಹೆನ್ನಾ ವಿರ್ಕುನೆನ್, ವ್ಯಾಪಾರ ಮತ್ತು ಆರ್ಥಿಕ ಭದ್ರತೆ ಆಯುಕ್ತ ಮರೋಸ್ ಸೆಫ್‌ಕೊವಿಕ್, ನವೋದ್ಯಮ, ಸಂಶೋಧನಾ ಮತ್ತು ನಾವೀನ್ಯತೆ ಆಯುಕ್ತೆ ಎಕಾಟೆರ್ನಾ ಜೆಹರೀವಾ ಸಭೆಯಲ್ಲಿ ಪಾಲ್ಗೊಂಡಿದ್ದರು. ಸಭೆ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಡಾ.ಎಸ್.ಜೈಶಂಕರ್, ಸೆಮಿಕಂಡಕ್ಟರ್, ಕೃತಕಬುದ್ಧಿಮತ್ತೆ, ೬-ಜಿ, ವಿದ್ಯುತ್ ವಾಹನಗಳು, ಹಸಿರು ಹೈಡ್ರೋಜನ್ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರ

ಸಂಬಂಧಗಳ ಹೊಸ ಅವಕಾಶಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಗಿದೆ ಎಂದಿದ್ದಾರೆ. ಇದೇ ವೇಳೆ ಸಚಿವರು, ಡಿಜಿಟಲ್ ಪಾಲುದಾರಿಕೆ, ಶುದ್ಧ ಮತ್ತು ಹಸಿರು ಇಂಧನ ಉಪಕ್ರಮಗಳು ಮತ್ತು ವ್ಯಾಪಾರ, ಹೂಡಿಕೆಗಳು ಮತ್ತು ಸುಸ್ಥಿರ ಪೂರೈಕೆ ಸರಪಳಿಗಳಲ್ಲಾಗಿರುವ ಪ್ರಗತಿಯ ಕುರಿತು ಪರಿಶೀಲನೆ ನಡೆಸಿದರು.

*****

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯಲ್ಲಿ ಸುಧಾರಣೆ ತರಲು ಭಾರತ ಕರೆ ನೀಡಿದೆ. ಈ ಜಾಗತಿಕ ವೇದಿಕೆಯಲ್ಲಿ ಬದಲಾವಣೆಗಾಗಿ ಬೇಡಿಕೆ ಸ್ಪಷ್ಟವಾಗಿದ್ದು, ತುರ್ತಾಗಿ ಆಗಬೇಕಿದೆ ಎಂದು ಭಾರತ ಹೇಳಿದೆ. ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, ೮೦ ವರ್ಷಗಳಿಂದ ಬದಲಾಗದೇ ಇರುವ ಭದ್ರತಾ ಮಂಡಳಿಯ ರಚನೆ, ಜಾಗತಿಕ ವಾಸ್ತವಗಳಿಗೆ ಹೊಂದಾಣಿಕೆಯಾಗುತ್ತಿಲ್ಲ ಎಂದರು. ವಾಷಿಂಗ್ಟನ್‌ನಲ್ಲಿ ನಿನ್ನೆ ಭದ್ರತಾ ಮಂಡಳಿಯ ಸುಧಾರಣೆಗಳ ಕುರಿತಾದ ಅಂತರ್ ಸರ್ಕಾರಿ ಕಾರ್ಯ ವಿಧಾನಗಳ ಕುರಿತಾದ ಚರ್ಚೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಂಡಳಿಯ ಅಂಗ ಸಂಸ್ಥೆಗಳಲ್ಲಿ ಹೆಚ್ಚಿನ ಪಾರದರ್ಶಕತೆಯ ಅಗತ್ಯವನ್ನು ಒತ್ತಿ ಹೇಳಿದ ಅವರು, ಸುಧಾರಣೆಗೆ ಆದ್ಯತೆ ನೀಡಲು ಸಭೆಯಲ್ಲಿ ಹಲವರು ಕರೆ ನೀಡಿದ್ದಾರೆ. ಜನರ ನಿರೀಕ್ಷೆಗಳನ್ನು ಪೂರೈಸಲು ಮತ್ತು ಪ್ರಸ್ತುತತೆಯನ್ನು ಕಾಪಾಡಿಕೊಳ್ಳಲು ಮಂಡಳಿಯ ಸುಧಾರಣೆ ಅತ್ಯಗತ್ಯ ಎಂದು ಪರ್ವತನೇನಿ ಹರೀಶ್ ಹೇಳಿದ್ದಾರೆ.

*****

ಪ್ರಧಾನಿ ನರೇಂದ್ರ ಮೋದಿ ಅವರಿಂದು ನವದೆಹಲಿಯಲ್ಲಿ ಯುರೋಪಿಯನ್ ಕಮಿಷನ್‌ನ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರನ್ನು ಭೇಟಿಯಾದರು. ಯುರೋಪಿಯನ್ ಕಮಿಷನ್‌ನ ಅಧ್ಯಕ್ಷರಾದ ಉರ್ಸುಲಾ ಅವರು ದೆಹಲಿಯಲ್ಲಿರುವ ರಾಜ್ ಘಾಟ್ ಗೆ ಭೇಟಿ ನೀಡಿ, ಮಹಾತ್ಮ ಗಾಂಧಿ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು. ಐರೋಪ್ಯ ಒಕ್ಕೂಟದ ಒಟ್ಟು ೨೭ ಆಯುಕ್ತರಲ್ಲಿ ೨೨ ಆಯುಕ್ತರೊಂದಿಗೆ ಎರಡು ದಿನಗಳ ಭಾರತ ಭೇಟಿಗಾಗಿ ವಾನ್ ಡೆರ್ ಲೇಯೆನ್ ಅವರು ನಿನ್ನೆ ದೆಹಲಿಗೆ ಆಗಮಿಸಿದರು. ಭಾರತಕ್ಕೆ ಐರೋಪ್ಯ ಒಕ್ಕೂಟದ ಆಯುಕ್ತರ ನಿಯೋಗದ ಮೊದಲ ಭೇಟಿ ಇದಾಗಿದ್ದು, ಕಳೆದ ವರ್ಷ ಡಿಸೆಂಬರ್‌ನಲ್ಲಿ ಅಧಿಕಾರ ವಹಿಸಿಕೊಂಡ ನೂತನ ಆಯುಕ್ತರ ನಿಯೋಗದ ಯುರೋಪ್ ಹೊರಗಿನ ಮೊದಲ ಪ್ರವಾಸ ಇದಾಗಿದೆ. ಬೆಳೆಯುತ್ತಿರುವ ಸಹಯೋಗಗಳ ಆಧಾರದ ಮೇಲೆ ಈ ಭೇಟಿಯು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿರೀಕ್ಷೆಯಿದೆ.

*****

ದೇಶದ ಮೊದಲ ರಾಷ್ಟ್ರಪತಿ ಡಾ. ಬಾಬು ರಾಜೇಂದ್ರ ಪ್ರಸಾದ್ ಅವರ ಪುಣ್ಯ ಸ್ಮರಣೆ ಇಂದು. ಇಂದು ದೇಶ ಅವರನ್ನು ಸ್ಮರಿಸುತ್ತಿದೆ. ಅವರ ಕುರಿತಂತೆ

ಒಂದು ವರದಿ....

೧೮೮೪ರ ಡಿಸೆಂಬರ್ ೩ ರಂದು ಬಿಹಾರದ ಜೆರದೈ ನಲ್ಲಿ ಜನಿಸಿದ ಡಾ. ಬಾಬು ರಾಜೇಂದ್ರ ಪ್ರಸಾದ್, ಭಾರತದ ಸ್ವಾತಂತ್ರ್ಯ ಹೋರಾಟಗಾರರಾಗಿ ಸಮಾಜಸೇವಕರಾಗಿ ಗುರುತಿಸಿಕೊಂಡರು. ಮಹಾತ್ಮ ಗಾಂಧಿ, ವಲ್ಲಭಭಾಯಿ ಪಟೇಲ್, ಜವಾಹರ್ ಲಾಲ್ ನೆಹರು ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರಂತಹ ನಾಯಕರೊಂದಿಗೆ ಭಾರತೀಯ ರಾಷ್ಟ್ರೀಯತಾವಾದಿ ಚಳವಳಿಯಲ್ಲಿ ಸಕ್ರಿಯವಾಗಿ ಕೊಡುಗೆ ನೀಡಿದರು. ಭಾರತ ಸ್ವಾತಂತ್ರ್ಯ ಪಡೆದ ನಂತರ ಮೊದಲ ಸಂವಿಧಾನವನ್ನು ರಚಿಸಿದ ಪ್ರಮುಖ ನಾಯಕ ಮತ್ತು ಹೊಸ ಮತ್ತು ಮುಕ್ತ ಭಾರತದ ಸಂವಿಧಾನ ಸಭೆಯ ನೇತೃತ್ವ ವಹಿಸಿದ್ದರು. ಡಾ. ಪ್ರಸಾದ್ ಭಾರತದ ಗಣರಾಜ್ಯವನ್ನು ರೂಪಿಸುವಲ್ಲಿ ಪ್ರಮುಖ ವಾಸ್ತುಶಿಲ್ಪಿಗಳಲ್ಲಿ ಒಬ್ಬರು. ಅವರು ೧೨ ವರ್ಷಗಳ ಕಾಲ ಭಾರತದ ರಾಷ್ಟ್ರಪತಿಯಾಗಿ ಸೇವೆ ಸಲ್ಲಿಸಿದರು. ಸ್ವಾತಂತ್ರ್ಯ ಹೋರಾಟಗಾರ ಫೆಬ್ರವರಿ ೨೮, ೧೯೬೩ ರಂದು ಕೊನೆಯುಸಿರೆಳೆದರು. ಇವರಿಗೆ ೧೯೬೨ರಲ್ಲಿ ಅತ್ಯುನ್ನತ ನಾಗರಿಕ ಪ್ರಶಸ್ತಿ“ಭಾರತ ರತ್ನ” ಸಂದಿದೆ.

*****

ಈ ವರ್ಷದ ಅಂತ್ಯದೊಳಗೆ ಭಾರತದಲ್ಲಿ ಕ್ಷಯರೋಗ ನಿರ್ಮೂಲನೆಗೆ ಎಲ್ಲಾ ಪ್ರಯತ್ನಗಳು ನಡೆಯುತ್ತಿವೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಹೇಳಿದ್ದಾರೆ. ಒಡಿಶಾದ ಪುರಿಯಲ್ಲಿ ಭಾರತದಲ್ಲಿ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯಲ್ಲಿ ಉತ್ತಮ ಅನುಕರಣೀಯ ಅಭ್ಯಾಸಗಳು ಮತ್ತು ನಾವೀನ್ಯತೆ ಕುರಿತು ೯ನೇ ರಾಷ್ಟ್ರೀಯ ಶೃಂಗಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ೨೦೧೭ ರಲ್ಲಿ ಸರ್ಕಾರ ನೂತನ ಆರೋಗ್ಯ ನೀತಿಯನ್ನು ಅಳವಡಿಸಿಕೊಂಡ ನಂತರ ಸಾಕಷ್ಟು ಸುಧಾರಣೆಗಳನ್ನು ತರಲಾಗಿದೆ ಎಂದು ಹೇಳಿದರು.

*****

ದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ರಾಷ್ಟ್ರ ರಾಜಧಾನಿಯಲ್ಲಿ ಕಾನೂನು ಸುವ್ಯವಸ್ಥೆ ಕುರಿತ ಪರಿಶೀಲನಾ ಸಭೆ ನಡೆಯಿತು. ಸಭೆಯಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತ, ಗೃಹ ಸಚಿವ ಆಶಿಶ್ ಸೂದ್, ಕೇಂದ್ರ ಗೃಹ ಸಚಿವಾಲಯದ ಕಾರ್ಯದರ್ಶಿಗಳು ಸೇರಿದಂತೆ ಮತ್ತಿತರ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದಾರೆ.

*****

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರಿಂದು ಯುರೋಪಿಯನ್ ವಾಣಿಜ್ಯ ಮತ್ತು ಆರ್ಥಿಕ ಭದ್ರತಾ ಆಯೋಗದ ಆಯುಕ್ತ ಮಾರೋಸ್ ಸೆಫ್ಕೊವಿಕ್ ಅವರೊಂದಿಗೆ ಸಂವಾದ ನಡೆಸಿದರು. ಈ ವೇಳೆ ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಮತ್ತು ವ್ಯಾಪಾರ ಮತ್ತು ತಂತ್ರಜ್ಞಾನ ಮಂಡಳಿಯ ಪ್ರಗತಿಯ ಕುರಿತು ಸಮಾಲೋಚನೆ ನಡೆಸಲಾಯಿತು.

*****

ಪಾಕಿಸ್ತಾನದ ಗಡ್ಡಾಫಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಟೂರ್ನಿಯ ಬಿ ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಅಫ್ಘಾನಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೨.೩೦ಕ್ಕೆ ಆರಂಭವಾಗಲಿದೆ.

**END**